ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012. ದೂರವಾಣಿ: 080-23 460 460 (5 ಲೈನ್‌ಗಳು)

ಫ್ಯಾಕ್ಸ್: 080-23461576 ಇ-ಮೇಲ್: keauthority-ka@nic.in ವೆಬ್‌ಸೈಟ್: http://kea.kar.nic.in

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.21/2019 ದಿನಾಂಕ: 17.04.2020

## ಅಧಿಸೂಚನೆ

## ಪಿಜಿಇಟಿ-2020 - ಕರ್ನಾಟಕದಲ್ಲಿನ ಸ್ನಾತಕೋತ್ತರ ವೈದ್ಯಕೀಯ ಮತ್ತು ದಂತ ವೈದ್ಯಕೀಯ (ಪದವಿ ಮತ್ತು ಡಿಪ್ಲೊಮ) ಕೋರ್ಸುಗಳ ಪ್ರವೇಶಕ್ಕಾಗಿ ಏಕರೂಪದ ಕೌನ್ಸಿಲಿಂಗ್ - 2020-21

ಸರ್ಕಾರದ ಆದೇಶ ಸಂಖ್ಯೆ ಎಂಇಡಿ 48 ಆರ್‌ಜಿಯು 2020, ಬೆಂಗಳೂರು **ದಿನಾಂಕ: 16.04.2020ರ** ಅನ್ವಯ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು NEET-PG 2020 / NEET MDS 2020 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗು ಅರ್ಹತಾ ಮಾನದಂಡಗಳನ್ನು ಪೂರೈಸುವ ಅರ್ಹ ಅಭ್ಯರ್ಥಿಗಳಿಂದ 2020-21 ನೇ ಸಾಲಿಗೆ ಕರ್ನಾಟಕ ರಾಜ್ಯದಲ್ಲಿನ ಸ್ನಾತಕೋತ್ತರ ಪದವಿ / ಡಿಪ್ಲೊಮ ವೈದ್ಯಕೀಯ ದಂತವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಅಂದರೆ ಸರ್ಕಾರಿ ವೈದ್ಯಕೀಯ / ದಂತವೈದ್ಯಕೀಯ ಕಾಲೇಜುಗಳ ಸೀಟುಗಳು, ಖಾಸಗಿ ಮತ್ತು ಅಲ್ಪ ಸಂಖ್ಯಾತ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಾಗುವ ಸರ್ಕಾರಿ ಕೋಟದ ಸೀಟುಗಳು ಮತ್ತು ಖಾಸಗಿ ಮತ್ತು ಅಲ್ಪ ಸಂಖ್ಯಾತ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳಲ್ಲಿ ಖಾಸಗಿ ಸೀಟುಗಳ (KPCF, KRLMPCA, AMPCK and Private Universities) ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು **ದಿನಾಂಕ 14.04.2020ರ ಸಂ. 5:00 ರಿಂದ 20.04.2020 ರಾತ್ರಿ 11:59ರ ವರೆಗೆ** ಅರ್ಜಿ ಸಲ್ಲಿಸಬಹುದಾಗಿರುತ್ತದೆ ಮತ್ತು **ದಿನಾಂಕ 21.04.2020** ರೊಳಗಾಗಿ ಅರ್ಜಿ ಶುಲ್ಕವನ್ನು ಪಾವತಿಸಬಹುದಾಗಿರುತ್ತದೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

ವಿವರವಾದ ಅರ್ಹತಾ ಮಾನದಂಡಗಳನ್ನೊಳಗೊಂಡ ಮಾಹಿತಿ ಪುಸ್ತಕ 2020 ಅನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿರುತ್ತದೆ.

NEET-PG 2020 / NEET MDS 2020 ನಲ್ಲಿ ಅರ್ಹತೆಯನ್ನು ಪಡೆದ ಮಾತ್ರಕ್ಕೆ, ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ / ನಿಗದಿತ ಪ್ರಮಾಣ ಪತ್ರಗಳನ್ನು ಅಪ್‌ಲೋಡ್ ಮಾಡದಿದ್ದಲ್ಲಿ ಅಭ್ಯರ್ಥಿಯು ಯಾವುದೇ ಹಕ್ಕನ್ನು ಹೊಂದುವುದಿಲ್ಲ. ಮುಂದುವರಿದು, ನೊಂದಣಿ ಮಾಡಿಕೊಂಡು ಆನ್‌ಲೈನ್ ದಾಖಲಾತಿ ಪರಿಶೀಲನೆಯನ್ನು ಯಶಸ್ವಿಯಾಗಿ ಪೂರೈಸುವ ಅಭ್ಯರ್ಥಿಗಳು ಮಾತ್ರ ಕರ್ನಾಟಕದಲ್ಲಿನ ಸರ್ಕಾರಿ / ಖಾಸಗಿ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.

ನೊಂದಣಿ ಮಾಡದಿರುವ ಅಥವಾ ನೊಂದಣಿ ಮಾಡಿ ದಾಖಲಾತಿಗಳನ್ನು ಪರಿಶೀಲಿಸಿಕೊಳ್ಳದೆ ಇರುವ ಅಭ್ಯರ್ಥಿಗಳು ಪ್ರಾಧಿಕಾರದಿಂದಾಗಲೀ ಅಥವಾ ಕಾಲೇಜುಗಳಿಂದಾಗಲೀ ಸೀಟುಗಳನ್ನು ತೆಗೆದುಕೊಳ್ಳಲು ಅನುಮತಿಸಲಾಗುವುದಿಲ್ಲ, mop-up ಸುತ್ತಿನ ಸೀಟು ಹಂಚಿಕೆಯ ನಂತರ ಉಳಿಯಬಹುದಾದ ಸೀಟುಗಳನ್ನು ಆಯಾ ಕಾಲೇಜುಗಳಿಗೆ ವರ್ಗಾಯಿಸಲಾಗುತ್ತದೆ. ಈ ಸೀಟುಗಳನ್ನು ಭರ್ತಿ ಮಾಡಿಕೊಳ್ಳಲು, ಪ್ರಾಧಿಕಾರವು ಕಳುಹಿಸುವ ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಮಾಡಿಸಿದ ಆದರೆ ಯಾವುದೇ ಸೀಟುಗಳನ್ನು ಹಂಚಿಕೆ ಪಡೆಯದೇ ಇರುವ ಅಭ್ಯರ್ಥಿಗಳ ಪಟ್ಟಿಯ ಅನುಕ್ರಮದಂತೆ ಕಾಲೇಜುಗಳಲ್ಲಿ ಸೀಟುಗಳನ್ನು ಭರ್ತಿಮಾಡಿಕೊಳ್ಳಲಾಗುತ್ತದೆ. (ಭಾರತ ಸರ್ಕಾರದ ಸೂಚನೆಗಳ ಅನ್ವಯ)

**-: ಸೂಚನೆ :-**

**1)** ನೀಟ್ ಪಿಜಿ 2020 / ನೀಟ್ ಎಂಡಿಎಸ್ 2020 ರಲ್ಲಿ ಅರ್ಹತೆ ಪಡೆದ ಎಲ್ಲಾ ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ಪಿಜಿ ವೈದ್ಯಕೀಯ / ದಂತ ವೈದ್ಯಕೀಯ (ಪದವಿ / ಡಿಪ್ಲೊಮಾ) ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗಲು ಆನ್‌ಲೈನ್ ಮೂಲಕ ನೊಂದಾಯಿಸಿಕೊಳ್ಳಲು ಮತ್ತು ಆನ್‌ಲೈನ್ ದಾಖಲೆ ಪರಿಶೀಲನಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದೆ.

**2)** ಅಭ್ಯರ್ಥಿಗಳು ಅರ್ಜಿಯಲ್ಲಿನ ಕ್ಲೈಮ್‌ಗೆ ಅನುಗುಣವಾಗಿಯೇ ಎಲ್ಲಾ ದಾಖಲೆಗಳು / ಪ್ರಮಾಣ ಪತ್ರಗಳನ್ನು PDF ರೂಪದಲ್ಲಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಿಗದಿತ Portal ಅನ್ನು ಆಯ್ಕೆ ಮಾಡಿಕೊಂಡು Upload ಮಾಡಬೇಕು, ಇಲ್ಲವಾದಲ್ಲಿ ಇಚ್ಛೆ / ಆಯ್ಕೆಗಳನ್ನು ದಾಖಲಿಸಲು ಮತ್ತು ಸೀಟು ಹಂಚಿಕೆಗೆ ಪರಿಗಣಿಸಲು ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ಅಂತಹ ಅಭ್ಯರ್ಥಿಗಳು ಕರ್ನಾಟಕ ರಾಜ್ಯದಲ್ಲಿನ ಸೀಟುಗಳನ್ನು ಕೆಇಎ ಮುಖಾಂತರ ಅಥವಾ ಕಾಲೇಜು ಮುಖಾಂತರ ಪಡೆಯಲು ಅರ್ಹತೆಯನ್ನು ಹೊಂದುವುದಿಲ್ಲ.

**3)** ದಾಖಲೆಗಳನ್ನು ಇಮೇಲ್ ಮುಖಾಂತರ ಅಥವಾ ಪೋಸ್ಟ್ ಅಥವಾ ಕೊರಿಯರ್ ಮುಖಾಂತರ ಕಳುಹಿಸಬಾರದು. ಅಭ್ಯರ್ಥಿಗಳು ದಾಖಲೆಗಳನ್ನು PDF ರೂಪದಲ್ಲಿ ಕೆಇಎ ಲಾಗಿನ್ ಪೋರ್ಟಲ್ ಮುಖಾಂತರವೇ ಸಲ್ಲಿಸಬೇಕು.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ಅನ್ನು ನೋಡಲು ಕೋರಿದೆ.

ಸಹಿ/-(ಸುರಳ್ಕರ್ ವಿಕಾಸ್ ಕಿಶೋರ್, ಭಾ.ಆ.ಸೇ.),

ಕಾರ್ಯನಿರ್ವಾಹಕ ನಿರ್ದೇಶಕರು, ಕಪಪ್ರಾ ಮತ್ತು ಸದಸ್ಯ ಕಾರ್ಯದರ್ಶಿ, ಪ್ರವೇಶ ಪರೀಕ್ಷಾ ಸಮಿತಿ.

ವಾಸಾಸಂಇ/ಬೆಂ.ನ/2020-21